ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ಬೀದರ್ ಜಿಲ್ಲೆಯಲ್ಲಿ ಕೊಳವೆ ಬಾವಿ ನಿಷೇಧಿಸಿರುವ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :-

566 (805) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲಾಧಿಕಾರಿಗಳು ದಿನಾಂಕ : 15-02-2020ರಂದು ನೋಟಿಸ್ ಹೊರಡಿಸಿ, ಜಿಲ್ಲೆಯಾದ್ಯಂತ ಹೊಸ ಕೊಳವೆ ಬಾವಿ ತೋಡುವುದನ್ನು ನಿಷೇಧಿಸಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅವರು ಯಾವ ಆಧಾರದ ಮೇಲೆ ನಿಷೇಧಿಸಲಾಗಿದೆ ;

(ಆ) ಈ ಆದೇಶದಿಂದ ಜಿಲ್ಲೆಯ ರೈತರು ಮತ್ತು ಜನ ಸಾಮಾನ್ಯರು ಪರದಾಡುವಂತೆ ಮಾಡಿರುವುದು ಸರಿಯಾದ ಕ್ರಮವೇ ; ಸರಿಯಲ್ಲದಿದ್ದರೆ ಈ ಆದೇಶ ಹೊರಡಿಸಿರುವ ಜಿಲ್ಲಾಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗುವುದು ; ಕೈಗೊಳ್ಳದಿದ್ದಲ್ಲಿ, ಇದಕ್ಕೆ ಸರ್ಕಾರದ ನಿಲುವೇನು ?